ತೆರೆಯಲು ಕ್ರಮ ಕೈಗೊಳ್ಳಬೇಕೆಂದು ಸನ್ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರನ್ನು ಕೋರುತ್ತೇನೆ.

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತ ಪ್ರೌಢಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೇ ಈಗಾಗಲೇ ಕಬ್ಬನ್ ಪಾರ್ಕ್‌ನಲ್ಲಿ 2-10-1994ರಿಂದ ಮಕ್ಕಳ ಗ್ರಂಥಾಲಯವನ್ನು ಪ್ರಾರಂಭಿಸಲಾಗಿದೆ. (ಹಿಂದೆ ಮಯೂರ ಹೋಟೆಲ್ ಇದ್ದ ಕಟ್ಟಡದಲ್ಲಿ) ಈ ಗ್ರಂಥಾಲಯವು ಬೆಳಿಗ್ಗೆ 11 ರಿಂದ ಸಾಯಂಕಾಲ 6.00 ಘಂಟೆಯವರೆಗೆ ಸೇವೆ ನೀಡುತ್ತಿದೆ. ಹಾಗೂ ಸೋಮವಾರ ವಾರದ ರಜಾ ದಿನವಿದ್ದು, ಸಾರ್ವತ್ರಿಕ ರಜೆಗಳಲ್ಲಿ ಕಾರ್ಯನಿರ್ವಹಿಸುವುದಿಲ್ಲ.

ಶಾಸನ ರಚನಾ ಕಾರ್ಯಕಲಾಪಗಳು

ಅ) ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ) (ತಿದ್ದುಪಡಿ) ವಧೇಯಕ, 1995

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜೆ.ಹೆಚ್. ಪಟೇಲ್ (ಉಪಮುಖ್ಯಮಂತ್ರಿಗಳು) : ಮಾನ್ಯ ಉಪಧ್ಯಕ್ಷರೇ, ಮಾನ್ಯ ಕಂದಾಯ ಮಂತ್ರಿಗಳ ಪರವಾಗಿ 1995ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾಪ ಏನೆಂದರೆ "1995ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜೆ.ಹೆಚ್. ಪಟೇಲ್(ಉಪ ಮುಖ್ಯಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೇ, 1995ರ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಆ) ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ, 1995

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೇ, 1995 ನೇ ಸಾಲಿನ ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾಪ ಏನೆಂದರೆ "1995 ನೇ ಸಾಲಿನ ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ನೀಡುವುದು".

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.